# ಕರ್ನಾಟಕ ಸರ್ಕಾರ : ಕಾರ್ಮಿಕ ಇಲಾಖೆ

ಸಂಖ್ಯೆ: ಪಿ&ಎಸ್/ಎನ್‌ಎಫ್‌ಹೆಚ್/ಸಿಆರ್-01/2018-19

ಕಾರ್ಮಿಕ ಆಯುಕ್ತರ ಕಛೇರಿ
"ಕಾರ್ಮಿಕ ಭವನ"
ಬನ್ನೇರುಘಟ್ಟ ರಸ್ತೆ, ಬೆಂಗಳೂರು-29
ದಿನಾಂಕ: 08.06.2018

ಇವರಿಗೆ :

**ನಿರ್ದೇಶಕರು**
ಕರ್ನಾಟಕ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,
ಶಿವಾಜಿನಗರ,
ಬೆಂಗಳೂರು

ಮಾನ್ಯರೇ,

ವಿಷಯ: ದಿನಾಂಕ 14.06.2018 ರಂದು ಗ್ರಾಮ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ದಿನದಂದು ರಾಜ್ಯಾದ್ಯಂತ ಅರ್ಹ ಮತದಾರ ಕಾರ್ಮಿಕರಿಗೆ ವೇತನ ಸಹಿತ ರಜೆಯನ್ನು ಘೋಷಿಸುವ ಬಗ್ಗೆ.

ಉಲ್ಲೇಖ: ರಾಜ್ಯ ಚುನಾವಣಾ ಆಯೋಗ ಪತ್ರ ಸಂಖ್ಯೆ : ರಾಚುಆ/236/ಟಿಜೆಡ್‌ಪಿ/2017 ದಿನಾಂಕ : 07.06.2018.

= = =

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿವಿಧ ಕಾರಣಗಳಿಂದ ತೆರವಾಗಿರುವ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ದಿನಾಂಕ 14.06.2018 ರಂದು ಉಪ ಚುನಾವಣೆ ನೆಡಸಲು ರಾಜ್ಯ ಚುನಾವಣಾ ಆಯೋಗವು ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸಿರುತ್ತದೆ. (ಪ್ರತಿ ಲಗತ್ತಿಸಿದೆ). ಸದರಿ ದಿನದಂದು ರಾಜ್ಯಾದ್ಯಂತ ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ

Scanned by CamScanner

ರಜಾ ದಿನಗಳು) ಕಾಯ್ದೆಯ ಕಲಂ 3–ಎ ಹಾಗೂ 1951ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷನ್ 135(ಬಿ) ರಡಿಯಲ್ಲಿ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಸಂಸ್ಥೆ/ನಿಯೋಜಕರು ಅನುವು ಮಾಡಿಕೊಡಬೇಕಾರಿರುತ್ತದೆ. ಈ ಸಂಬಂಧ ಈ ಕಛೇರಿಯಿಂದ ಹೊರಡಿಸಲಾದ ಪತ್ರಿಕಾ ಪ್ರಕಟಣೆಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ.

ಸದರಿ ಪತ್ರಿಕಾ ಪ್ರಕಟಣೆಯನ್ನು ಎಲ್ಲಾ ಮಾಧ್ಯಮ ಹಾಗೂ ದೃಶ್ಯ ಮಾಧ್ಯಮಗಳಲ್ಲಿ ಪ್ರಕಟಿಸುವಂತೆ ಈ ಮೂಲಕ ಕೋರಿದೆ.

ತಮ್ಮ ವಿಶ್ವಾಸಿ

Chaitra V.
12/06/18

ಆಯುಕ್ತರು,
ಕಾರ್ಮಿಕ ಇಲಾಖೆ, ಕರ್ನಾಟಕ ಸರ್ಕಾರ

Scanned by CamScanner

# ಕರ್ನಾಟಕ ಸರ್ಕಾರ : ಕಾರ್ಮಿಕ ಇಲಾಖೆ

ಸಂಖ್ಯೆ: ಕಾಅಕ/ಎನ್‌ಎಫ್‌ಹೆಚ್/ಸಿಆರ-1/2018-19

ಕಾರ್ಮಿಕ ಆಯುಕ್ತರ ಕಛೇರಿ
"ಕಾರ್ಮಿಕ ಭವನ"
ಬನ್ನೇರುಘಟ್ಟ ರಸ್ತೆ, ಬೆಂಗಳೂರು-29
ದಿನಾಂಕ: 08.06.2018

## ಪತ್ರಿಕಾ ಪ್ರಕಟಣೆ

ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳ ಸದಸ್ಯ ಸ್ಥಾನಗಳಿಗೆ ದಿನಾಂಕ 14.06.2018 ರಂದು ಉಪ ಚುನಾವಣೆ ನಡೆಸಲು ರಾಜ್ಯ ಚುನಾವಣಾ ಆಯೋಗವು ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸಿರುತ್ತದೆ. ಸದರಿ ದಿನದಂದು ರಾಜ್ಯಾದ್ಯಂತ ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾ ದಿನಗಳು) ಕಾಯ್ದೆಯ ಕಲಂ 3-ಎ ಹಾಗೂ 1951ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷನ್ 135(ಬಿ) ರಡಿಯಲ್ಲಿ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಸಂಸ್ಥೆ / ನಿಯೋಜಕರು ಅನುವು ಮಾಡಿಕೊಡ ಬೇಕಾರಿರುತ್ತದೆ. ಆದ್ದರಿಂದ ಚುನಾವಣೆಯ ನಡೆಯುವ ಸ್ಥಳಗಳ ಎಲ್ಲಾ ಕಾರ್ಖಾನೆಗಳು, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳ ಮಾಲೀಕರು ಸದರಿ ದಿನದಂದು ಕಾಯ್ದೆಯನ್ವಯ ಕಾರ್ಮಿಕರು ಮತದಾನ ಮಾಡಲು ಅನುಕೂಲವಾಗುವಂತೆ ವೇತನ ಸಹಿತ ರಜೆ ನೀಡುವಂತೆ ಈ ಮೂಲಕ ಆದೇಶಿಸಿದೆ. ತಪ್ಪಿದಲ್ಲಿ ಸಂಬಂಧಪಟ್ಟ ಸಂಸ್ಥೆ/ನಿಯೋಜಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದೆಂದು ಈ ಮೂಲಕ ಸೂಚಿಸಿದೆ.

Chaitra V. 12/06/18

ಆಯುಕ್ತರು
ಕಾರ್ಮಿಕ ಇಲಾಖೆ, ಕರ್ನಾಟಕ ಸರ್ಕಾರ

Scanned by CamScanner